# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಡಾ// ರಾಜ್ ಕುಮಾರ್ ವಾರ್ಡ್ ಸಂಖ್ಯೆ: 106**

---

ಸಂ : ಸ.ಅ(ವಾ–106)/ಪಿ.ಆರ್/ /2021–22 ದಿನಾಂಕ: 17/**04/2021**

## ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 17–04–2021 ರಂದು ವಾರ್ಡ್ ಸಂಖ್ಯೆ: 106 **ಡಾ// ರಾಜ್‌ಕುಮಾರ್ ವಾರ್ಡ್** ನಲ್ಲಿ ಶ್ರೀಮತಿ ಗೀತಾ ಎಲ್, ಕಾರ್ಯಪಾಲಕ ಅಭಿಯಂತರು, ಬಿಬಿಎಂಪಿ ಹಾಗೂ ವಾರ್ಡ್ ನಂ. 106 ರ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಎನ್. ಅನ್ನಪೂರ್ಣ, ವೈಧ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅ.ದಾಸರಹಳ್ಳಿ.
2) ಶ್ರೀ ತೀರ್ಥಪ್ರಸಾದ್, ಎಇಇ, ಘನತ್ಯಾಜ್ಯ ವಿಭಾಗ
3) ಶ್ರೀ ರಾಜೇಂದ್ರ ಕಂದಾಯ ಪರಿವೀಕ್ಷಕರು.
4) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು
5) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
6) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
7) ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
8) ಶ್ರೀ ಚಂದ್ರಶೇಖರ್, ಕಿರಿಯ ಆರೋಗ್ಯ ಪರಿವೀಕ್ಷಕರು
9) ಶ್ರೀ ಅವಿನಾಶ್, ಸೂಪರ್‌ವೈಸರ್, ಘನತ್ಯಾಜ್ಯ
10) ಶ್ರೀ ರಾಜೇಶ್, ಸೂಪರ್‌ವೈಸರ್, ಘನತ್ಯಾಜ್ಯ
11) ಶ್ರೀ ಮುರಳಿ, ತೆರಿಗೆ ವಸೂಲಾತಿಗಾರರು

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- **ಆರೋಗ್ಯ ಇಲಾಖೆ:-** ಶ್ರೀಮತಿ ಅನ್ನಪೂರ್ಣ ವೈದ್ಯರು ಹಾಜರಿದ್ದು ಪ್ರಸ್ತುತ ಕೋವಿಡ್ 2ನೇ ಅಲೆಯ ಬಗ್ಗೆ ವಿವರಿಸಿದರು ಹಾಗೂ ಮಾನ್ಯ ಅಧ್ಯಕ್ಷರುಗಳಿಗೆ ವಾರ್ಡ್‌ನಲ್ಲಿ ಸಕ್ರಿಯವಾಗಿರುವ ಅಂಕಿಅಂಶಗಳನ್ನು ತಿಳಿಸಿದರು. ಮಾನ್ಯ ಅಧ್ಯಕ್ಷರು ಕಡ್ಡಾಯವಾಗಿ ಕೋವಿಡ್ ಲಸಿಕೆಯನ್ನು ಹಾಕಿಸಿಕೊಳ್ಳುವಂತೆ ತಿಳಿಸಿದರು.

- **<u>ಸ್ವಚ್ಚತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ</u>**:- ಮಾನ್ಯ ಅಧ್ಯಕ್ಷರು ಘನತ್ಯಾಜ್ಯ ವಿಲೇವಾರಿ ಬಗ್ಗೆ ಸ.ಕಾ.ಅ ರವರಿಂದ ಮಾಹಿತಿ ಪಡೆದರು.
- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ ವಿವರ ಸಂಭಂದಪಟ್ಟ ಅಧಿಕಾರಿಗಳಿಂದ ವಿವರ ಪಡೆದರು.
- ವಾರ್ಡ್‌ನಲ್ಲಿ ಬೀದಿ ದೀಪಗಳನ್ನು ಸರಿಯಾಗಿ ನಿರ್ವಹಿಸುವಂತೆ ಸಂಭಂದಪಟ್ಟ ಅಧಿಕಾರಿಗೆ ಮಾನ್ಯ ಅದ್ಯಕ್ಷರು ಸೂಚಿಸಿದರು.
- ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ಅಗೆದಿರುವ ರಸ್ತೆಗಳನ್ನು ಶೀಘ್ರವಾಗಿ ಮುಚ್ಚಲು ಮಾನ್ಯ ಅಧ್ಯಕ್ಷರು ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳಿಗೆ ಸೂಚಿಸಿದರು.
- ರಸ್ತೆ ಬದಿಯ ಹೋಟೆಲ್‌ಗಳಲ್ಲಿ ಶುಚಿತ್ವವನ್ನು ಕಾಪಾಡಿಕೊಳ್ಳಬೇಕೆಂದು ಮಾನ್ಯ ಅದ್ಯಕ್ಷರು ಹಿರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ಸೂಚಿಸಿದರು.
- ರಸ್ತೆಯಲ್ಲಿರುವ ಡೆಬ್ರಿಸ್ಗಳನ್ನು ಸಿಲ್ಟ್ ಅಂಡ್ ಟ್ರಾಕ್ಟರ್ ಮೂಲಕ ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ತಿಳಿಸಿದರು.
- ಅಂಡರ್ ಪಾಸ್‌ಗಳಲ್ಲಿ ಬೆಳೆದಿರುವ ಗಿಡಗಳನ್ನು ಶೀಘ್ರವಾಗಿ ತೆರವುಗೊಳಿಸಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ಮಾಡಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕೇಬಲ್ ಅಳವಡಿಕೆ ಕಾರ್ಯವನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಹಾಗೂ ಸರಿಯಾದ ರೀತಿಯಲ್ಲಿ ಮುಚ್ಚುವಂತೆ ತಿಳಿಸಿದರು

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

| | |
|---|---|
| 17/04/24 | 17/04/24 |
| ಸದಸ್ಯ ಕಾರ್ಯದರ್ಶಿ | ವಾರ್ಡ್ ಸಮಿತಿ ಅದ್ಯಕ್ಷರು |
| ಹಾಗೂ ಸಹಾಯಕ ಅಭಿಯಂತರರು | ಹಾಗೂ ವಾರ್ಡ್ ನೋಡಲ್ ಅಧಿಕಾರಿಗಳು |
| ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್ | ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್ |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

**ಪ್ರತಿಯನ್ನು:-**

1) ಮಾನ್ಯ ಮುಖ್ಯ ಆಯುಕ್ತರುರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ